ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 11/2/2020

11/2/20

# ಮಾಜಿ ಸಚಿವ ಡಿ. ಮಂಜುನಾಥ್ ನಿಧನ

ಸಂ.ಕ. ಸಮಾಚಾರ ಬೆಂಗಳೂರು: ಮಾಜಿ ಸಚಿವ ಡಿ.ಮಂಜುನಾಥ್ ಅವರು ಸೋಮವಾರ ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ.

ಮೃತರಿಗೆ 92 ವರ್ಷ ವಯಸ್ಸಾಗಿತ್ತು. ದೀರ್ಘ ಕಾಲದ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದ ಮಂಜುನಾಥ್ ಅವರು ನಗರದ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಮೃತರು, ಪತ್ನಿ, ಇಬ್ಬರು ಗಂಡು ಮಕ್ಕಳು ಹಾಗು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ, ಅಭಿಮಾನಿಗಳನ್ನು ಅಗಲಿದ್ದಾರೆ.



1980ರ ಅವಧಿಯಲ್ಲಿ ಜನತಾ ಪಕ್ಷದ ಅಧ್ಯಕ್ಷರಾಗಿದ್ದರು. ರಾಮಕೃಷ್ಣ ಹೆಗಡೆ, ದೇವೇಗೌಡರು ಹಾಗೂ ಜೆ.ಎಚ್. ಪಟೇಲ್ ಸಂಪುಟದಲ್ಲಿ ಅವರು ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು.

ರಾಜಕೀಯದಿಂದ ದೂರ ಉಳಿದಿದ್ದ ಅವರು, ಹಿರಿಯೂರಿನ ತಮ್ಮ ತೋಟದ ಮನೆಯಲ್ಲಿ ವಿಶ್ರಾಂತ ಜೀವನ ನಡೆಸುತ್ತಿದ್ದರು. ಆರೋಗ್ಯ ಹದಗೆಟ್ಟ ಹಿನ್ನೆಲೆಯಲ್ಲಿ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲುಮಾಡಲಾಗಿತ್ತು

## ಗಣ್ಯರ ಸಂತಾಪ

ಡಿ. ಮಂಜುನಾಥ್ ಅವರ ನಿಧನಕ್ಕೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಂತಾಪ ಸೂಚಿಸಿದ್ದು, ಇವರ ನಿಧನದಿಂದ ಮೌಲ್ಯಾಧಾರಿತ ರಾಜಕಾರಣದ ಪೀಳಿಗೆಯ ಕೊಂಡಿಯೊಂದು ಕಳಚಿದಂತಾಗಿದೆ ಎಂದು ಅವರು ವಿಷಾದಿಸಿದ್ದಾರೆ. ಹಾಗೆಯೇ ಮಾಜಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಎಚ್.ಡಿ. ಕುಮಾರಸ್ವಾಮಿ, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ, ಸಚಿವರಾದ ಬಸವರಾಜ ಬೊಮ್ಮಾಯಿ, ಆರ್. ಅಶೋಕ್, ಎಸ್. ಸುರೇಶ್ ಕುಮಾರ್, ಕೆ.ಎಸ್. ಈಶ್ವರಪ್ಪ, ಡಾ. ಅಶ್ವತ್ಥನಾರಾಯಣ ಸೇರಿದಂತೆ ಅನೇಕರು ಸಂತಾಪ ಸೂಚಿಸಿದ್ದಾರೆ.